## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಸಂಯೋಜಿತ ಯೋಜನೆಯಡಿ ನಿಗದಿಪಡಿಸಲಾದ ತೃತೀಯ ಹಂತದ ಹೆಚ್ಚುವರಿ ಚಿಕಿತ್ಸೆಗಳು ಮತ್ತು ಮಾರ್ಪಡಿಸಿದ ದರಗಳನ್ನು ಜ್ಯೋತಿ ಸಂಜೀವಿನಿ ಯೋಜನೆಯಡಿ ಅಳವಡಿಸಿಕೊಳ್ಳುವ ಬಗ್ಗೆ.

ಓದಲಾಗಿದೆ:

1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 14 ಎಸ್ಎಂಆರ್ 2013, ದಿನಾಂಕ 18.08.2014.
2. ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ದಿನಾಂಕ 16.11.2018ರ ಪತ್ರ ಸಂಖ್ಯೆ: HFW/SAST/93/2013-14/2017-18 (P-II)

****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆಯನ್ನು ಒದಗಿಸಲು "ಜ್ಯೋತಿ ಸಂಜೀವಿನಿ" ಯೋಜನೆಯನ್ನು 2014-15ನೇ ಸಾಲಿನಿಂದ ಜಾರಿಗೊಳಿಸಲು ಮಂಜೂರಾತಿ ನೀಡಲಾಗಿದೆ. ಅದರಲ್ಲಿ 7 ಮಾರಣಾಂತಿಕ ಖಾಯಿಲೆಗಳಿಗೆ ಸಂಬಂಧಿಸಿದಂತೆ ಗುರುತಿಸಲಾಗಿರುವ 450 ರೀತಿಯ ವೈದ್ಯಕೀಯ ಚಿಕಿತ್ಸಾ ವಿಧಾನಗಳು ಹಾಗೂ 50 ಮುಂದುವರಿದ ಚಿಕಿತ್ಸಾ ಸೌಲಭ್ಯಗಳು ನಗದು ರಹಿತವಾಗಿ ಲಭ್ಯವಾಗುತ್ತಿವೆ.

ದಿನಾಂಕ 02.03.2018ರಿಂದ ರಾಜ್ಯದಲ್ಲಿ ಆರೋಗ್ಯ ಕರ್ನಾಟಕ ಯೋಜನೆಯು ಅನುಷ್ಠಾನಗೊಂಡಿದ್ದು, ಸದರಿ ಯೋಜನೆಯಲ್ಲಿ 154 ತುರ್ತು ಚಿಕಿತ್ಸೆಗಳು ಹಾಗೂ ತೃತೀಯ ಹಂತದ 581 ಚಿಕಿತ್ಸಾ ವಿಧಾನಗಳು ಲಭ್ಯವಿರುತ್ತವೆ. ತರುವಾಯ ದಿನಾಂಕ: 15.11.2018ರಂದು ಕೇಂದ್ರ ಸರ್ಕಾರದ ಆಯುಷ್ಮಾನ್ ಭಾರತ್ ಯೋಜನೆಯೊಂದಿಗೆ ಆರೋಗ್ಯ ಕರ್ನಾಟಕ ಯೋಜನೆಯನ್ನು ಸಂಯೋಜಿಸಿದ್ದು, ಸಂಯೋಜಿತ ಯೋಜನೆಯಲ್ಲಿ 1614 ಚಿಕಿತ್ಸಾ ವಿಧಾನಗಳಿದ್ದು, ಇದರಲ್ಲಿ 900 ತೃತೀಯ ಹಂತದ ಚಿಕಿತ್ಸಾ ವಿಧಾನಗಳು ಹಾಗೂ 169 ತುರ್ತು ಚಿಕಿತ್ಸಾ ವಿಧಾನಗಳು ಲಭ್ಯವಿರುತ್ತವೆ. ಈ ಸಂಯೋಜಿತ ಯೋಜನೆಯಲ್ಲಿ ಆಯುಷ್ಮಾನ್ ಭಾರತ್‌ದಲ್ಲಿ ನಿಗದಿಪಡಿಸಿದಂತೆ ಭಾಗಶಃ ದರಗಳನ್ನು ಅಳವಡಿಸಿದ್ದು, ಇನ್ನುಳಿದಂತೆ ಆರೋಗ್ಯ ಕರ್ನಾಟಕ ದರಗಳನ್ನು ಮುಂದುವರೆಸಲಾಗಿರುತ್ತದೆ. ಈ ಸಂಯೋಜಿತ ಯೋಜನೆಯ ಪ್ರಯೋಜನವನ್ನು ಜ್ಯೋತಿ ಸಂಜೀವಿನಿ ಯೋಜನೆಯಡಿಯಲ್ಲಿ ತೃತೀಯ ಹಂತದ ಹೆಚ್ಚುವರಿ ಚಿಕಿತ್ಸೆಗಳು ಮತ್ತು ಮಾರ್ಪಡಿಸಿದ ದರಗಳನ್ನು ಅಳವಡಿಸಿಕೊಳ್ಳಲು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಇವರು ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ಹೆಚ್ಚುವರಿ ಚಿಕಿತ್ಸೆಗಳನ್ನು ಜ್ಯೋತಿ ಸಂಜೀವಿನಿ ಯೋಜನೆಯಡಿಯಲ್ಲಿ ಅಳವಡಿಸಿಕೊಳ್ಳುವುದರಿಂದ, ಸದರಿ ಯೋಜನೆಯಡಿ ಚಿಕಿತ್ಸೆ ಪಡೆಯುವ ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಈ ಯೋಜನೆಯ ಫಲಾನುಭವಿಗಳಿಗೆ ಹೆಚ್ಚಿನ ಪ್ರಯೋಜನವಾಗಲಿದೆ. ಈ ಪ್ರಸ್ತಾವನೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಭಿಪ್ರಾಯವನ್ನು ಸಹ ಪಡೆಯಲಾಗಿರುತ್ತದೆ. ಅದರಂತೆ ಈ ಆದೇಶ,

.....2

Suvarna Arogya Suraksha Trust
K.H Road, Bangalore-27
Date 8/5/19

ಸರ್ಕಾರದ ಆದೇಶದ ಸಂಖ್ಯೆ: ಸಿಆಸುಇ 42 ಎಸ್‌ಎಂಆರ್ 2018,
ಬೆಂಗಳೂರು, ದಿನಾಂಕ 03.05.2019

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಸಂಯೋಜಿತ ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯಲ್ಲಿ 1614 ಚಿಕಿತ್ಸಾ ವಿಧಾನಗಳಿದ್ದು, ಇದರಲ್ಲಿ 900 ತೃತೀಯ ಹಂತದ ಚಿಕಿತ್ಸಾ ವಿಧಾನಗಳು ಹಾಗೂ 169 ತುರ್ತು ಚಿಕಿತ್ಸಾ ವಿಧಾನಗಳು ಲಭ್ಯವಿದ್ದು ಈ ಸಂಯೋಜಿತ ಯೋಜನೆಯಲ್ಲಿ ನಿಗದಿಪಡಿಸಲಾದ ತೃತೀಯ ಹಂತದ ಹೆಚ್ಚುವರಿ ಚಿಕಿತ್ಸೆಗಳು ಮತ್ತು ಮಾರ್ಪಡಿಸಿದ ದರಗಳನ್ನು ಜ್ಯೋತಿ ಸಂಜೀವಿನಿ ಯೋಜನೆಯಡಿಯಲ್ಲಿ ಅಳವಡಿಸಿಕೊಳ್ಳಲು ಸರ್ಕಾರದ ಅನುಮತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಚಂದ್ರಹಾಸ ಗಂ. ತಾಳೂಕರ)
ಸರ್ಕಾರದ ಉಪಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇ.ನಿ-ಕರ್ನಾಟಕ ಸರ್ಕಾರ ಆರೋಗ್ಯ ಕಲ್ಯಾಣ ಟ್ರಸ್ಟ್)

**ಇವರಿಗೆ:-**

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಹೊರ ವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು – ಇದನ್ನು ಕರ್ನಾಟಕ ರಾಜ್ಯ ಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 100 ಪ್ರತಿಗಳನ್ನು ಸರ್ಕಾರದ ಉಪ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಕರ್ನಾಟಕ ಸರ್ಕಾರ ಆರೋಗ್ಯ ಕಲ್ಯಾಣ ಟ್ರಸ್ಟ್) ಕೊಠಡಿ ಸಂಖ್ಯೆ 31, ನೆಲಮಹಡಿ, ವಿಧಾನಸೌಧ, ಬೆಂಗಳೂರು ಇವರಿಗೆ ಒದಗಿಸಲು (ಮುಖ ಪತ್ರದೊಂದಿಗೆ)

**ಪ್ರತಿಗಳು:-**

1. ಮಹಾಲೇಖಪಾಲರು (ಲೆಕ್ಕಪತ್ರ) (ಲೆಕ್ಕ ಪರಿಶೋಧನೆ 1 ಮತ್ತು 2) ಕರ್ನಾಟಕ ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿಕಟ್ಟಡ, ಬೆಂಗಳೂರು.
7. ಆಯುಕ್ತರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದ್‌ರಾವ್ ವೃತ್ತ, ಬೆಂಗಳೂರು.
8. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, 4ನೇ ಮಹಡಿ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಭವನ, ಡಬಲ್ ರಸ್ತೆ, ಶಾಂತಿನಗರ, ಬೆಂಗಳೂರು-27
9. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದ್‌ರಾವ್ ವೃತ್ತ, ಬೆಂಗಳೂರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.